ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019-20 ದಿನಾಂಕ : 05-09-2019

## ಪತ್ರಿಕಾ ಪ್ರಕಟಣೆ

### ಸೆಪ್ಟೆಂಬರ್ 6 ರಂದು ನಗರಕ್ಕೆ ಪ್ರಧಾನಿ, ಮರುದಿನ ಚಂದ್ರಯಾನ ವೀಕ್ಷಣೆ

ಬೆಂಗಳೂರು, ಸೆಪ್ಟೆಂಬರ್ 5 (ಕರ್ನಾಟಕ ವಾರ್ತೆ) :

ಭಾರತದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಸೆಪ್ಟೆಂಬರ್ 6 ರಂದು ಬೆಂಗಳೂರಿಗೆ ಆಗಮಿಸಿ ಮರುದಿನ ಸೆಪ್ಟೆಂಬರ್ 7 ರಂದು ನಸುಕಿನಲ್ಲಿ ಪೀಣ್ಯಾದ ಭಾರತೀಯ ಬಾಹ್ಯಾಕಾಶ ಸಂಶೋಧನಾ ಕೇಂದ್ರ ( ಇಸ್ರೋ ) ದ ಇಸ್ಟ್ರಾಕ್‌ನಲ್ಲಿ ಚಂದ್ರಯಾನ ವೀಕ್ಷಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅಂದೇ ಮುಂಬೈಗೆ ತೆರಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### ಅವಧಿ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 5 (ಕರ್ನಾಟಕ ವಾರ್ತೆ) :

ಆಗಸ್ಟ್ -2019 ನೇ ಸಾಲಿಗೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಪುರುಷ) ಡೈರಿ ವೃತ್ತ, ಹೊಸೂರು ರಸ್ತೆ, ಬೆಂಗಳೂರು-29 ಇಲ್ಲಿ ವಿವಿಧ ವೃತ್ತಿಗಳಲ್ಲಿ ಆನ್ ಲೈನ್ ಪ್ರವೇಶಾತಿಯ ನಂತರ ಉಳಿಕೆಯಾಗಿರುವ ಸ್ಥಾನಗಳನ್ನು ಅಂತಿಮ ಸುತ್ತಿನಲ್ಲಿ ಭರ್ತಿ ಮಾಡಲು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಭರ್ತಿಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಅಂತಿಮ ದಿನಾಂಕವನ್ನು ದಿನಾಂಕ: 16-09-2019 ರ ವರೆಗೆ ವಿಸ್ತರಿಸಲಾಗಿದೆ.

ಅಭ್ಯರ್ಥಿಗಳು ಸಂಸ್ಥೆಯ ಕಛೇರಿಯಲ್ಲಿ ಪ್ರವೇಶ ಅರ್ಜಿಗಳನ್ನು ಪಡೆಯಬಹುದಾಗಿದೆ. ಸಮರ್ಪಕವಾಗಿ ಭರ್ತಿಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ: 16-09-2019. ಆಗಿರುತ್ತದೆ. ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಅಭ್ಯರ್ಥಿಗಳಿಗೆ ವಿವಿಧ ವೃತ್ತಿಗಳಲ್ಲಿ ಖಾಲಿ ಇರುವ ಸ್ಥಾನಗಳನ್ನು ಪ್ರವೇಶಾತಿಯ ನಿಯಮಾನುಸಾರ ಹಂಚಿಕೆ ಮಾಡಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ಜಲಮಂಡಳಿಯಿಂದ  ನೇರ ಫೋನ್-ಇನ್ ಕಾರ್ಯಕ್ರಮ

**ಬೆಂಗಳೂರು, ಸೆಪ್ಟೆಂಬರ್ 5 (ಕರ್ನಾಟಕ ವಾರ್ತೆ) :**

**ಬೆಂಗಳೂರು ಜಲಮಂಡಳಿಯು ದಿನಾಂಕ 07.09.2019 ರ ಶನಿವಾರದಂದು ಬೆಳಿಗ್ಗೆ 09:00 ರಿಂದ 10:30 ರವರೆಗೆ ಮಂಡಳಿಯ ಮಾನ್ಯ ಅಧ್ಯಕ್ಷರೊಂದಿಗೆ ನೇರ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಿದೆ. ಈ ಸಂಬಂಧ ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳಿ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಲು ಈ ಪೋನ್-ಇನ್ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಲು ಕೋರಲಾಗಿದೆ. ಸಾರ್ವಜನಿಕರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; 080-22945119. ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಬಹುದೆಂದು ಪ್ರಕಟಣೆ ತಿಳಿಸಿದೆ.**

## ವಸತಿ ಸಚಿವರ ಪ್ರವಾಸ ಕಾರ್ಯಕ್ರಮ

**ಬೆಂಗಳೂರು, ಸೆಪ್ಟೆಂಬರ್ 5 (ಕರ್ನಾಟಕ ವಾರ್ತೆ) :**

**ವಸತಿ ಸಚಿವ ಶ್ರೀ ವಿ. ಸೋಮಣ್ಣ ಅವರು ಸೆಪ್ಟೆಂಬರ್ 6 ರಿಂದ 11 ರವರೆಗೆ ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.**